ಇ. ಹುಲಸೂರು ಮತಕ್ಷೇತ್ರದ ವ್ಯಾಪ್ತಿಯಲ್ಲಿ ಬರುವ ಅಂತರ ರಾಜ್ಯ ರಸ್ತೆಗಳ ಸುಧಾರಣೆ ಹಾಗೂ ದುರಸ್ತಿಗಾಗಿ ಕಳೆದ ಮೂರು ವರ್ಷಗಳಲ್ಲಿ "ಆ" ದಲ್ಲಿ ತೋರಿಸಿದ ವೆಚ್ಚವಲ್ಲದೆ ಇನ್ನೂ ಕೆಳಗಿನಂತೆ ವೆಚ್ಚ ಮಾಡಲಾಗಿದೆ.

1999-2000	ರೂ. 5.58 ಲಕ್ಷಗಳು
2000-2001	ರೂ. 9.36 ಲಕ್ಷಗಳು
2001-2002	ರೂ. 2.27 ಲಕ್ಷಗಳು
ಒಟ್ಟು	ರೂ. 17.21 ಲಕ್ಷಗಳು

ಈ. 2002-03 ನೇ ಸಾಲಿನ ಆಯವ್ಯಯದಲ್ಲಿ ವಿಧಾನಸಭಾ ಕ್ಷೇತ್ರದ ವ್ಯಾಪ್ತಿಯಲ್ಲಿನ ವಿಶೇಷ ಅಭಿವೃದ್ಧಿ ಲೆಕ್ಕ ಶೀರ್ಷಿಕೆಯಲ್ಲಿ ಬಾಲ್ಕಿ-ನೀಲಂಗ ರಸ್ತೆ ಅಭಿವೃದ್ಧಿಗಾಗಿ ರೂ.1.10 ಲಕ್ಷಗಳ ಹಣ ಮಂಜೂರು ಮಾಡಲಾಗಿದೆ.

ಹುಲಸೂರು ಮತಕ್ಷೇತ್ರದ ವ್ಯಾಪ್ತಿಯಲ್ಲಿ ಬರುವ ಸಾಯಿಗಾಂವ್ ಸೇತುವೆ ನಿರ್ಮಾಣ

922 (1529) - ಶ್ರೀ ರಾಜೇಂದ್ರವರ್ಮ (ಹುಲಸೂರ್): ಮಾನ್ಯ ಲೋಕೋಪಯೋಗಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ. ಹುಲಸೂರು ಮತಕ್ಷೇತ್ರದ ವ್ಯಾಪ್ತಿಯಲ್ಲಿ ಬರುವ ಸಾಯಿಗಾಂವ್ ಬಳಿ ಅಂತರರಾಜ್ಯಕ್ಕೆ ಸಂಪರ್ಕ ಕಲ್ಪಿಸಲು ಅನುಕೂಲವಾಗುವಂತೆ ಸೇತುವೆಯನ್ನು ನಿರ್ಮಿಸುವ ಪ್ರಸ್ತಾವನೆ ಸರ್ಕಾರದ ಮುಂದಿರುವುದು ನಿಜವಲ್ಲವೇ.

ಆ. ಹಾಗಿದ್ದಲ್ಲಿ, ಈ ವಿಷಯದ ಬಗ್ಗೆ ಇಲ್ಲಿಯವರೆಗೆ ಕೈಗೊಂಡಿರುವ ಕ್ರಮಗಳೇನು.

ಇ. ಇದಕ್ಕಾಗಿ ಇಲ್ಲಿಯವರೆಗೆ ಖರ್ಚು ಮಾಡಿರುವ ಹಣವೆಷ್ಟು? ಪ್ರಸಕ್ತ ವರ್ಷದ ಆಯವ್ಯಯದಲ್ಲಿ ಈ ಕಾಮಗಾರಿಗಾಗಿ ಎಷ್ಟು ಹಣವನ್ನು ಮೀಸಲಾಗಿರಿಸಿದೆ.

ಈ. ಅಂತರರಾಜ್ಯಕ್ಕೆ ಸಂಪರ್ಕ ಕಲ್ಪಿಸುವ ಈ ಸೇತುವೆಯ ಕಾಮಗಾರಿಯನ್ನು ಪ್ರಸಕ್ತ ಸಾಲಿನಲ್ಲಿ ತೆಗೆದುಕೊಳ್ಳಲಾಗುವುದೇ, ಇಲ್ಲದಿದ್ದಲ್ಲಿ, ಕಾರಣಗಳೇನು?

ಶ್ರೀ ಧರ್ಮಸಿಂಗ್ (ಲೋಕೋಪಯೋಗಿ ಸಚಿವರು) :

ಅ. ಹೌದು. ನಬಾರ್ಡ್ ಯೋಜನೆಯಡಿ ಪ್ರಸ್ತಾವಿಸಲಾಗಿದೆ.

ಆ. ಈ ಕಾಮಗಾರಿಯು ಸಚಿವ ಸಂಪುಟ ಉಪ ಸಮಿತಿಯಿಂದ ಒಪ್ಪಿತವಾಗಿರುವುದಿಲ್ಲ. ಈ ಕಾಮಗಾರಿಯು ಜಿಲ್ಲಾ ಪಂಚಾಯತ್ ವ್ಯಾಪ್ತಿಗೆ ಬರುವುದರಿಂದ ಲೋಕೋಪಯೋಗಿ ಇಲಾಖೆಯವತಿಯಿಂದ ಬೇರೆ ಯಾವುದೇ ಕಾರ್ಯಕ್ರಮದಲ್ಲಿ ಕೈಗೊಳ್ಳಲಾಗುವುದಿಲ್ಲ.

ಇ. ಉದ್ಭವಿಸುವುದಿಲ್ಲ.

ಈ. ಈ ಬಗ್ಗೆ ಪರಿಶೀಲಿಸಲಾಗುವುದು.

ಉಡುಪಿ ವಿಧಾನಸಭಾ ಕ್ಷೇತ್ರದ ವ್ಯಾಪ್ತಿಯಲ್ಲಿನ ರಾಜ್ಯ ಹೆದ್ದಾರಿ ಅಗಲಗೊಳಿಸುವುದು

923 (1352) - ಶ್ರೀ ಸಭಾಪತಿ ಯು.ಆರ್. (ಉಡುಪಿ): ಮಾನ್ಯ ಲೋಕೋಪಯೋಗಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ. ಉಡುಪಿ ವಿಧಾನಸಭಾ ಕ್ಷೇತ್ರ ವ್ಯಾಪ್ತಿಯಲ್ಲಿರುವ ಮಲ್ಪೆ-ಕಲ್ಯಾಣ-ಆದಿಉಡುಪಿ-ಬನ್ನಂಜೆ-ಕಲಂಕ- ಕಡಿಯಾಳಿ ರಾಜ್ಯ ಹೆದ್ದಾರಿಯನ್ನು ಅಗಲಗೊಳಿಸಲು ಸರ್ಕಾರ ಯಾವ ಯೋಜನೆಯನ್ನು ಹಾಕಿಕೊಂಡಿರುತ್ತದೆ.

ಆ. ಇದು ಯಾವ ಹಂತದಲ್ಲಿದೆ.

ಇ. ಈ ಯೋಜನೆಗೆ ಸದ್ಯದಲ್ಲೇ ಮಂಜೂರಾತಿ ನಿರೀಕ್ಷಿಸಬಹುದೇ, ನಿರೀಕ್ಷಿಸಬಹುದಾದಲ್ಲಿ, ಯಾವಾಗ ಮಂಜೂರಾತಿ ನೀಡಲಾಗುವುದು?

ಶ್ರೀ ಧರ್ಮಸಿಂಗ್ (ಲೋಕೋಪಯೋಗಿ ಸಚಿವರು) :

ಅ. ಉಡುಪಿ ವಿಧಾನಸಭೆ ಕ್ಷೇತ್ರದ ವ್ಯಾಪ್ತಿಯಲ್ಲಿರುವ ಮಲ್ಪೆ-ಕಲ್ಯಾಡಿ-ಆದಿ ಉಡುಪಿ-ಬನ್ನಂಜೆ- ಕಲ್ಸಂಕ ಕಡಿಯಾಳ ರಾಜ್ಯ ಹೆದ್ದಾರಿ, ಅಂದರೆ ಲೋಕೋಪಯೋಗಿ ಇಲಾಖೆ ನಾಮಾಂಕಿತದಂತೆ ಆಗುಂಬೆ-ಮಲ್ಪೆ ರಾಜ್ಯ ಹೆದ್ದಾರಿ-25ಎ ರ ಕಿಮೀ. 37.50ರ, ಕಡಿಯಾಳಿಯಿಂದ ಕಿಮೀ. 43.40 ರ ಮಲ್ಪೆವರೆಗಿನ 5.90 ಕಿಮೀ. ಭಾಗವಾಗಿದ್ದು, ಈ ಚಾಚುವಿನ ಕಿಮೀ. 37.40 ರಿಂದ 39.80 ಕಿಮೀ. ವರೆಗಿನ 2.40 ಕಿಮೀ. ಉದ್ದದ ಅಗಲ ಕಿರಿದಾದ ಭಾಗವನ್ನು ಅಭಿವೃದ್ಧಿಪಡಿಸುವ ಕಾರ್ಯಕ್ರಮದಲ್ಲಿ ಅನುದಾನ ಲಭ್ಯತೆ ಮೇಲೆ ಯಾವುದಾದರೂ ಯೋಜನೆಯಡಿಯಲ್ಲಿ ಪರಿಶೀಲಿಸಲಾಗುವುದು.

ಆ. ಉದ್ಭವಿಸುವುದಿಲ್ಲ.

ಇ. ಉದ್ಭವಿಸುವುದಿಲ್ಲ.

ರಾಜ್ಯದಲ್ಲಿರುವ ಇಂಜಿನಿಯರ್‌ಗಳ ಖಾಲಿ ಹುದ್ದೆಗಳ ವಿವರ

924 (1353) - ಶ್ರೀ ಯು.ಆರ್. ಸಭಾಪತಿ (ಉಡುಪಿ): ಮಾನ್ಯ ಲೋಕೋಪಯೋಗಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ. ರಾಜ್ಯದಲ್ಲಿರುವ ಎಕ್ಸಿಕ್ಯೂಟಿವ್, ಅಸಿಸ್ಟೆಂಟ್ ಎಕ್ಸಿಕ್ಯೂಟಿವ್ ಹಾಗೂ ಜೂನಿಯರ್ ಇಂಜಿನಿಯರ್‌ಗಳ ಎಷ್ಟು ಹುದ್ದೆಗಳು ಖಾಲಿಯಾಗಿವೆ; (ಜಿಲ್ಲಾವಾರು ವಿವರ ನೀಡಿರಿ)

ಆ. ಈ ಹುದ್ದೆಗಳನ್ನು ಭರ್ತಿಗೊಳಿಸಲು ಸರಕಾರ ತೆಗೆದುಕೊಂಡಿರುವ ಕ್ರಮಗಳೇನು?

ಶ್ರೀ ಧರ್ಮಸಿಂಗ್ (ಲೋಕೋಪಯೋಗಿ ಸಚಿವರು) :

ಅ. ರಾಜ್ಯದಲ್ಲಿ 22 ಎಕ್ಸಿಕ್ಯೂಟಿವ್ ಇಂಜಿನಿಯರ್, 32 ಅಸಿಸ್ಟೆಂಟ್ ಎಕ್ಸಿಕ್ಯೂಟಿವ್ ಇಂಜಿನಿಯರ್ ಹಾಗೂ 1037 ಜೂನಿಯರ್ ಇಂಜಿನಿಯರ್‌ಗಳ ಹುದ್ದೆಗಳು ಖಾಲಿ ಇರುತ್ತವೆ. ಜಿಲ್ಲಾವಾರು ವಿವರಗಳನ್ನು ಅನುಬಂಧದಲ್ಲಿ ನೀಡಿದೆ.

ಆ. ಖಾಲಿ ಇರುವ ಎಕ್ಸಿಕ್ಯೂಟಿವ್ ಇಂಜಿನಿಯರ್ ಹಾಗೂ ಅಸಿಸ್ಟೆಂಟ್ ಎಕ್ಸಿಕ್ಯೂಟಿವ್ ಇಂಜಿನಿಯರ್ ಖಾಲಿ ಹುದ್ದೆಗಳನ್ನು ಪದೋನ್ನತಿ ಮೂಲಕ ಭರ್ತಿ ಮಾಡಲು ಪರಿಶೀಲಿಸಲಾಗುತ್ತಿದೆ. ಕಿರಿಯ ಇಂಜಿನಿಯರ್ ಖಾಲಿ ಹುದ್ದೆಗಳನ್ನು ನೇರ ನೇಮಕಾತಿ ಮೂಲಕ ಹಾಗೂ ಇಲಾಖೆಯಲ್ಲಿ ಸತತವಾಗಿ ಮಾಸಿಕ ವೇತನ ಆಧಾರದ ಮೇಲೆ (ಎಂ.ಆರ್.ಇ.)ಹತ್ತು ವರ್ಷಗಳ ಸತತ ಸೇವೆ ಸಲ್ಲಿಸಿರುವ ಕಿರಿಯ ಇಂಜಿನಿಯರುಗಳನ್ನು ಸಕ್ರಮಗೊಳಿಸುವ ಮೂಲಕ ಭರ್ತಿ ಮಾಡಲು ಕ್ರಮ ಕೈಗೊಳ್ಳಲಾಗುತ್ತಿದೆ.